ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:	**1152**
ಸದಸ್ಯರ ಹೆಸರು:	**ಶ್ರೀ.ಎನ್.ರವಿಕುಮಾರ್**
ಉತ್ತರಿಸುವ ದಿನಾಂಕ:	**17-03-2020**
ಉತ್ತರಿಸುವವರು:	**ಪೌರಾಡಳಿತ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು**

	ಪ್ರಶ್ನೆಗಳು	ಉತ್ತರ
ಅ	ರೇಷ್ಮೆ ಬೆಳೆಯನ್ನು ಉತ್ತೇಜಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;	ರೇಷ್ಮೆ ಇಲಾಖೆಯಿಂದ ರೇಷ್ಮೆ ಬೆಳೆಯನ್ನು ಉತ್ತೇಜಿಸಲು ಈ ಕೆಳಕಂಡ ಸಹಾಯಧನ/ಪ್ರೋತ್ಸಾಹಧನ ಸೌಲಭ್ಯಗಳನ್ನು ರೇಷ್ಮೆ ಬೆಳೆಗಾರರಿಗೆ ಒದಗಿಸಲಾಗುತ್ತಿದೆ. 1. ಸುಧಾರಿತ ಹಿಪ್ಪುನೇರಳೆ ತೋಟ ಬೆಳೆಯಲು, ನರ್ಸರಿ ಬೆಳೆಸಲು ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ ಒದಗಿಸಲಾಗುತ್ತಿದೆ. 2. ಹಿಪ್ಪುನೇರಳೆ ತೋಟಕ್ಕೆ ಟ್ರಂಚಿಂಗ್ - ಮಲ್ಚಿಂಗ್ ಮಾಡಲು ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ. 3. ಹಿಪ್ಪುನೇರಳೆ ತೋಟಕ್ಕೆ ಹನಿ ನೀರಾವರಿ ಅಳವಡಿಕೆಗೆ ಶೇ.90ರಷ್ಟು ಸಹಾಯಧನ. 4. ಹಿಪ್ಪುನೇರಳೆ ತೋಟದ ಮಣ್ಣಿನ ಫಲವತ್ತತೆಗಾಗಿ ಜೈವಿಕಗೊಬ್ಬರ ಬಳಕೆ, ಹಿಪ್ಪುನೇರಳೆ ಸೊಪ್ಪಿನ ಇಳುವರಿ ಹಾಗೂ ಗುಣಮಟ್ಟ ಹೆಚ್ಚಿಸುವ ಸಲುವಾಗಿ ಸಸ್ಯ ಸಂವರ್ಧಕ ಹಾಗೂ ಬೇರು ಕೊಳೆ ನಿಯಂತ್ರಣಕ್ಕಾಗಿ ಸಹಾಯಧನ. 5. ಹಿಪ್ಪುನೇರಳೆ ಮರ ಕೃಷಿ ಪದ್ಧತಿ ಉತ್ತೇಜನಕ್ಕಾಗಿ ಸಹಾಯಧನ. 6. ರೇಷ್ಮೆ ಹುಳು ಸಾಕಾಣಿಕೆ ಮನೆ/ಮೌಂಟಿಂಗ್ ಹಾಲ್ ನಿರ್ಮಾಣಕ್ಕೆ ಸಹಾಯಧನ. 7. ಸೋಂಕು ನಿವಾರಕಗಳ ಪೂರೈಕೆ ಮತ್ತು ಸಲಕರಣೆಗಳಿಗೆ ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ. 8. ರೋಟರಿ ಚಂದ್ರಿಕೆಗಳ ಖರೀದಿಗೆ ಸಹಾಯಧನ 9. ದ್ವಿತಳಿ ಚಾಕಿ ವೆಚ್ಚಕ್ಕೆ ಸಹಾಯಧನ. 10.ಚಾಕಿ ಸಾಕಾಣಿಕಾ ಕೇಂದ್ರದ ಸ್ಥಾಪನೆಗೆ / ಸಲಕರಣೆಗಳಿಗೆ ಸಹಾಯಧನ. 11.ನೂತನ ತಾಂತ್ರಿಕತೆಗಳ ಅಳವಡಿಕೆಗೆ ರೈತರಿಗೆ ತರಬೇತಿ ಮತ್ತು ಕಾರ್ಯಾಗಾರ. 12.ರೇಷ್ಮೆ ಗೂಡಿನ ಧಾರಣೆ ಕುಸಿತ ಸಂದರ್ಭದಲ್ಲಿ ರೇಷ್ಮೆ ಬೆಳೆಗಾರರಿಗೆ ರಕ್ಷಣಾತ್ಮಕ ದರ ನೀಡಲಾಗುತ್ತಿದೆ. 13.ದ್ವಿತಳಿ ಬಿತ್ತನೆ ಬೆಳೆಗಾರರು ಹಾಗೂ ಮೈಸೂರು ಬಿತ್ತನೆ ಬೆಳೆಗಾರರು ಬೆಳೆಯುವ ಬಿತ್ತನೆ ಗೂಡಿಗೆ ಪ್ರೋತ್ಸಾಹಧನ / ಬೋನಸ್ ನೀಡಲಾಗುತ್ತಿದೆ. 14.ರೇಷ್ಮೆ ಬಿತ್ತನೆ ಬೆಳೆಗಾರರಿಗೆ ಉತ್ಪಾದಕತೆ ಮತ್ತು ಗುಣಮಟ್ಟ ಆಧರಿಸಿ ಬಿತ್ತನೆ ಗೂಡಿಗೆ ಪ್ರೋತ್ಸಾಹಧನ ನೀಡಲಾಗುತ್ತಿದೆ. 15.ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಉತ್ಪಾದಿಸುವ ದ್ವಿತಳಿ ರೇಷ್ಮೆ ಗೂಡಿಗೆ ಕೆ.ಜಿ.ಗೆ ರೂ.10/-ರಂತೆ ಸಾಗಾಣಿಕೆ ವೆಚ್ಚ. ಇದಲ್ಲದೇ, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಹಿಪ್ಪುನೇರಳೆ ನರ್ಸರಿ / ತೋಟ ಸ್ಥಾಪನೆ, ತೋಟ ನಿರ್ವಹಣೆ ಮತ್ತು ಹಿಪ್ಪುನೇರಳೆ ಮರ ಕೃಷಿ ಪದ್ಧತಿ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದ್ದು, ರೈತರಿಗೆ ಕೂಲಿ/ಸಾಮಗ್ರಿ ವೆಚ್ಚವನ್ನು ಭರಿಸುವ ಮೂಲಕ ಗ್ರಾಮೀಣಾ ಪ್ರದೇಶದಲ್ಲಿ ಉದ್ಯೋಗವಕಾಶವನ್ನು ಕಲ್ಪಿಸಿ ಆರ್ಥಿಕ ಸದೃಢತೆಯನ್ನು ಒದಗಿಸಲಾಗುತ್ತಿದೆ.

ಆ	ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಬೆಳೆಯಲಾದ ರೇಷ್ಮೆ ಬೆಳೆಯ ಪ್ರಮಾಣವೆಷ್ಟು; (ಜಿಲ್ಲಾವಾರು ವಿವರ ನೀಡುವುದು)	ಅನುಬಂಧದಲ್ಲಿ ಒದಗಿಸಿದೆ.
ಇ	ರೇಷ್ಮೆ ಗೂಡಿಗೆ ಬೆಂಬಲ ಬೆಲೆ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು;	ರಾಜ್ಯದಲ್ಲಿ ರೇಷ್ಮೆ ಬೆಳೆಗಾರರು ಬೆಳೆದ ರೇಷ್ಮೆ ಗೂಡಿಗೆ ಬೆಂಬಲ ಬೆಲೆ ನೀಡುವ ಕಾರ್ಯಕ್ರಮವಿರುವುದಿಲ್ಲ. ಆದರೆ, ರೇಷ್ಮೆ ಗೂಡಿನ ಧಾರಣೆಯು ಕುಸಿತಗೊಂಡ ಸಂದರ್ಭದಲ್ಲಿ ರಕ್ಷಣಾತ್ಮಕ ದರವನ್ನು ನೀಡುವ ಮೂಲಕ ರೇಷ್ಮೆ ಬೆಳೆ ಬೆಳೆಯಲು ಪ್ರೋತ್ಸಾಹಿಸಲಾಗುತ್ತಿದೆ. ದ್ವಿತಳಿ ರೇಷ್ಮೆ ಗೂಡಿನ ದರ ಪ್ರತಿ ಕೆ.ಜಿ.ಗೆ ರೂ.260/- ಹಾಗೂ ಮಿಶ್ರತಳಿ ಗೂಡಿನ ದರ ಪ್ರತಿ ಕೆ.ಜಿ.ಗೆ ರೂ.220/-ಕ್ಕಿಂತ ಕಡಿಮೆಯಾದಾಗ ಪ್ರತಿ ಕೆ.ಜಿ. ದ್ವಿತಳಿ ಬಿತ್ತನೆ ಗೂಡಿಗೆ ಗರಿಷ್ಠ ರೂ.50/- ಹಾಗೂ ಪ್ರತಿ ಕೆ.ಜಿ. ಮಿಶ್ರತಳಿ ಗೂಡಿಗೆ ಗರಿಷ್ಠ ರೂ.40/-ಗಳಿಗೆ ಮೀರದಂತೆ ರಕ್ಷಣಾತ್ಮಕ ದರ ನೀಡಲು ಕ್ರಮವಹಿಸಲಾಗುತ್ತಿದೆ.
ಈ	ರಾಜ್ಯಮಟ್ಟದ ರೇಷ್ಮೆ ಬೆಳೆಗಾರರ ಸಮಾವೇಶ ಏರ್ಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?	ಕೇಂದ್ರ ರೇಷ್ಮೆ ಮಂಡಳಿ ಸಹಯೋಗದೊಂದಿಗೆ ರಾಜ್ಯ ಮಟ್ಟದ ರೇಷ್ಮೆ ಬೆಳೆಗಾರರ ಸಮಾವೇಶ/ರೇಷ್ಮೆ ಕೃಷಿ ಮೇಳವನ್ನು ಪ್ರತಿ ವರ್ಷವು ಆಯೋಜಿಸಲಾಗುತ್ತಿದೆ. ಸದರಿ ಸಮಾವೇಶದಲ್ಲಿ ಪ್ರಗತಿ ಪರ ರೇಷ್ಮೆ ಬೆಳೆಗಾರರು/ರೇಷ್ಮೆ ನೂಲು ಬಿಚ್ಚಾಣಿಕೆದಾರರಿಗೆ ನಗದು ಬಹುಮಾನದೊಂದಿಗೆ ರಾಜ್ಯ ಮಟ್ಟದ ಹಾಗೂ ಜಿಲ್ಲಾಮಟ್ಟದ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುತ್ತಿದೆ. ಮುಂದುವರೆದು,ನೂತನ ತಾಂತ್ರಿಕತೆಗಳು ಹಾಗೂ ಆವಿಷ್ಕಾರದ ಬಗ್ಗೆ ವಿಷಯ ತಜ್ಞರಿಂದ ಉಪನ್ಯಾಸ ಮತ್ತು ವಸ್ತುಪ್ರದರ್ಶನಗಳನ್ನು ಸಮಾವೇಶಗಳಲ್ಲಿ ಆಯೋಜಿಸಲಾಗುತ್ತಿದೆ.

ರೇಷ್ಮೆ 39 ರೇಕ್ರುವಿ 2020

(ನಾರಾಯಣ ಗೌಡ)
ಪೌರಾಡಳಿತ, ತೋಟಗಾರಿಕೆ ಮತ್ತು
ರೇಷ್ಮೆ ಸಚಿವರು

ವಿಧಾನ ಪರಿಷತ್ ಪ್ರಶ್ನೆ 1152ಕ್ಕೆ ಅನುಬಂಧ				
ಕ್ರ. ಸಂ	ಜಿಲ್ಲೆಗಳು	ಉತ್ಪಾದಿಸಲಾದ ರೇಷ್ಮೆ ಗೂಡು (ಮೆ.ಟನ್)		
		2017-18	2018-19	2019-20 (ಫೆಬ್ರವರಿ-2020ರ ಅಂತ್ಯಕ್ಕೆ)
1	ಬೆಂಗಳೂರು ಗ್ರಾಮಾಂತರ	3725	4118	3667
2	ಬೆಂಗಳೂರು ನಗರ	1089	1188	1166
3	ಚಿಕ್ಕಬಳ್ಳಾಪುರ	11783	14505	11296
4	ಚಿತ್ರದುರ್ಗ	647	852	778
5	ದಾವಣಗೆರೆ	194	369	162
6	ಕೋಲಾರ	9022	11137	9256
7	ರಾಮನಗರ	14645	19801	17892
8	ಶಿವಮೊಗ್ಗ	97	107	86
9	ತುಮಕೂರು	2723	3192	2617
10	ಚಾಮರಾಜನಗರ	252	243	212
11	ಚಿಕ್ಕಮಗಳೂರು	17	20	23
12	ದಕ್ಷಿಣ ಕನ್ನಡ	1	1	1
13	ಹಾಸನ	704	802	779
14	ಕೊಡಗು	4	4	4
15	ಮಂಡ್ಯ	17187	20199	19355
16	ಮೈಸೂರು	967	1226	1073
17	ಉಡುಪಿ	2	2	2
18	ಬಳ್ಳಾರಿ	585	922	1083
19	ಬೀದರ್	197	228	134
20	ಕಲಬುರ್ಗಿ	216	275	212
21	ಕೊಪ್ಪಳ	118	158	137
22	ರಾಯಚೂರು	209	288	217
23	ಯಾದಗಿರಿ	67	76	80
24	ಬಾಗಲಕೋಟೆ	257	357	335
25	ಬೆಳಗಾವಿ	329	511	414
26	ವಿಜಯಪುರ	87	143	120
27	ಧಾರವಾಡ	53	78	59
28	ಗದಗ	196	266	266
29	ಹಾವೇರಿ	774	1102	997
30	ಉತ್ತರ ಕನ್ನಡ	34	31	20
31	ಮೈಸೂರು ಚಿಕಿತ್ಸೆ ವಲಯ	652	815	604
	ರಾಜ್ಯದ ಒಟ್ಟು	**66833**	**83017**	**73047**